**<u>ಸಾಕ್ಷಿಗೆ ದಿನಾಂಕಃ 20.09.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ</u>**

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ Smt.Ambika ರವರಿಂದಃ</u>**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರಳಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು ಗುರುತಿಸಿದೆ.
**<u>ಸೂಚನೆ:</u>** ನಿ.ಪಿ.**2** ದಾಖಲೆಯು ತೆಲುಗು ಭಾಷೆಯಲ್ಲಿ ಇದೆ ಮತ್ತು ಅದರ ಭಾಷಾಂತರ ಪ್ರತಿಯನ್ನು ನಿ.ಪಿ.**2(**ಎ**)** ಎಂದು ಗುರುತಿಸಿದೆ.

3) **ಕಚ್ಚಾ ನಕ್ಷೆಗಳನ್ನು** ನಿ.ಪಿ.**3** ಮತ್ತು **4** ಎಂದು, ಮತ್ತು ಅಂತಿಮ ವರದಿಯನ್ನು ನಿ.ಪಿ.**5** ಎಂದು ಗುರುತಿಸಿದೆ.

4) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ದಾಖಲೆ ಮತ್ತು ಇದೇ ದಾಖಲೆಯ ಫೋಟೋ ಪ್ರತಿಯನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಯನ್ನು ಮತ್ತು ಫೋಟೋ ಪ್ರತಿಯನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಯನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಯನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಯನ್ನು ನಿ.ಪಿ.**6** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಯನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

5) **ಡಿಸ್ಚಾರ್ಜ್ ಸಮ್ಮರಿ ಅನ್ನು** ನಿ.ಪಿ.**7** ಎಂದು ಗುರುತಿಸಿದೆ.

**ಸೂಚನೆ:** ನಿ.ಪಿ.**7** ದಾಖಲೆಯು **5** ಹಾಳೆಗಳನ್ನು ಒಳಗೊಂಡಿದೆ.

6) **CT Left knee joint** ಅನ್ನು ನಿ.ಪಿ.**8** ಎಂದು, ಮತ್ತು **Radiograph** ಅನ್ನು ನಿ.ಪಿ.**9** ಎಂದು ಗುರುತಿಸಿದೆ.

7) **Final bill** ಅನ್ನು ನಿ.ಪಿ.**10** ಎಂದು ಗುರುತಿಸಿದೆ.

8) ಒಟ್ಟು **26** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**11** ಎಂದು ಗುರುತಿಸಿದೆ.

9) ಅಪಘಾತ ಆದ ಸ್ಥಳದ ಫೋಟೋಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ.**12** ರಿಂದ ನಿ.ಪಿ.**15** ಎಂದು ಗುರುತಿಸಿದೆ.

10) ಅಪಘಾತದ ವರದಿಯನ್ನು ನಿ.ಪಿ.**16** ಎಂದು ಗುರುತಿಸಿದೆ.

**ಸೂಚನೆ:** ನಿ.ಪಿ.1 ರಿಂದ ನಿ.ಪಿ.5 ಮತ್ತು ನಿ.ಪಿ.16 ಎಂದು ಗುರುತು ಆಗಿರುವ ದಾಖಲೆಗಳು ಗೂಟಿ ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

**ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.